All India Radio: Bangalore
National Bulletin In Kannada
13.04.2025 19.35 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ನಾಳೆ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ; ಅವರ ಆದರ್ಶ ಪಾಲನೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ ಪ್ರಧಾನಿಯವರಿಂದ ವಿವಿಧ ವಿಧಾಯಕ ಕಾರ್ಯಕ್ರಮಗಳಿಗೆ ಚಾಲನೆ
- ಪರಿವರ್ತನೆಯ ಬದಲಾವಣೆ ದಾಖಲಿಸಿದ ದೇಶದ ಸಹಕಾರಿ ರಂಗ - ಸಚಿವ ಅಮಿತ್ ಶಾ
- ಮುಂದಿನ ೨ ವರ್ಷಗಳಲ್ಲಿ ೧೦ ಲಕ್ಷ ಕೋಟಿ ವೆಚ್ಚದಲ್ಲಿ ಹೆದ್ದಾರಿಗಳ ಅಭಿವೃದ್ಧಿ - ಕೇಂದ್ರ ಸಚಿವ ನಿತಿನ್ ಗಡ್ಕರಿ
- ಐಪಿಎಲ್ ಕ್ರಿಕೆಟ್ ; ರಾಜಸ್ಥಾನ ರಾಯಲ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ೯ ವಿಕೆಟ್‌ಗಳ ಜಯ

<><><><>

ನಾಳೆ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜನ್ಮದಿನ. ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಮುನ್ನ ದಿನವಾದ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ದೇಶದ ಜನತೆಗೆ ಶುಭಾಶಯ ಕೋರಿದ್ದಾರೆ. ಅತ್ಯಂತ ಕಠಿಣ ಪರಿಸ್ಥಿತಿ ಹೊರತಾಗಿಯೂ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ವಿಶಿಷ್ಟವಾದ ಛಾಪನ್ನು ಮೂಡಿಸಿದ್ದು, ಅವರ ಜೀವನ ಸ್ಫೂರ್ತಿದಾಯಕವಾಗಿದೆ. ವಿಶೇಷ ಸಾಧನೆಗಳಿಂದಾಗಿ ಜಗತ್ತಿನಾದ್ಯಂತ ಅವರು, ಗೌರವಕ್ಕೆ ಪಾತ್ರರಾಗಿದ್ದರು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಸಂದೇಶದಲ್ಲಿ ತಿಳಿಸಿದ್ದಾರೆ. ಬಾಬಾ ಸಾಹೇಬ್ ಅವರು, ಅಸಾಮಾನ್ಯ ಸಾಮರ್ಥದೊಂದಿಗೆ ಬಹುಮುಖ ವ್ಯಕ್ತತ್ವ ಹೊಂದಿದ್ದರು. ಅವರು, ಅರ್ಥಶಾಸ್ತ್ರಜ್ಞರಾಗಿದ್ದರು, ಶಿಕ್ಷಣ ತಜ್ಞರಾಗಿದ್ದರು, ನ್ಯಾಯವಾದಿಗಳಾಗಿದ್ದರು ಹಾಗೂ ಮಹಾನ್ ಸಾಮಾಜಿಕ ಸುಧಾರಕರಾಗಿದ್ದರು. ಮಹಿಳೆಯರು ಹಾಗೂ ಶೋಷಿತ ವರ್ಗದವರ ಅರ್ಥಿಕ ಹಾಗೂ ಸಾಮಾಜಿಕ ಹಕ್ಕುಗಳಿಗಾಗಿ ಜೀವನವೀಡಿ ಹೋರಾಟ ನಡೆಸಿದ ಮಹಾನ್ ವ್ಯಕ್ತಿ ಎಂದು ರಾಷ್ಟ್ರಪತಿ

ದ್ರೌಪದಿ ಮುರ್ಮು ಹೇಳಿದ್ದಾರೆ. ದುರ್ಬಲ ವರ್ಗದವರ ಸಶಕ್ತಿಕರಣ ಮತ್ತು ಸಾಮಾಜಿಕ ಬದಲಾವಣೆಗೆ ಶಿಕ್ಷಣ ಪ್ರಮುಖ ಸಾಧನವಾಗಿದೆ ಎಂದು ಅಂಬೇಡ್ಕರ್ ಅವರು ಪರಿಗಣಿಸಿದ್ದರು. ದೇಶ ನಿರ್ಮಾಣ ಕಾರ್ಯದಲ್ಲಿ ಅವರಿಗಿದ್ದ ಬದ್ಧತೆ ಮುಂದಿನ ಜನಾಂಗಕ್ಕೆ ಸ್ಫೂರ್ತಿಯಾಗಿದೆ. ಅಂಬೇಡ್ಕರ್ ಅವರ ಆದರ್ಶಗಳನ್ನು ಅಳವಡಸಿಕೊಂಡು ಸಾಮಾಜಿಕ ಸಾಮರಸ್ಯ ಮತ್ತು ಸಮಾನತೆಗೆ ಶ್ರಮಿಸಬೇಕು ಎಂದು ರಾಷ್ಟ್ರಪತಿಯವರು ಕೋರಿದ್ದಾರೆ.

<><><>

ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ಹಾಗೂ ಭಾರತ ಸಂವಿಧಾನದ ಅಮೃತ ಮಹೋತ್ಸವ ವರ್ಷಾಚರಣೆ ಸಂದರ್ಭದಲ್ಲಿ ಕೇಂದ್ರ ಯುವ ಜನ ವ್ಯವಹಾರ ಹಾಗೂ ಕ್ರೀಡಾ ಸಚಿವಾಲಯ ಜೈ ಭೀಮ್ ಪಾದಯಾತ್ರೆ ಆಯೋಜಿಸಿದೆ. ದೇಶದ ವಿವಿಧ ೫೦೦ ಸ್ಥಳಗಳಲ್ಲಿ ಇಂದು ಜೈ ಭೀಮ್ ಪಾದಯಾತ್ರೆಯನ್ನು ಸಂಘಟಿಸಲಾಗಿತ್ತು.

<><><>

ದೇಶವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿಸುವಲ್ಲಿ ಡಾ. ಭೀಮರಾವ್ ಅಂಬೇಡ್ಕರ್ ಅವರ ಸಮಾನತೆ, ನ್ಯಾಯ, ಭ್ರಾತೃತ್ವ ಪರಿಕಲ್ಪನೆಯನ್ನು ಯುವಜನತೆ ಅಳವಡಿಸಿಕೊಳ್ಳಬೇಕೆಂದು ಕೇಂದ್ರ ಯುವಜನ ಹಾಗೂ ವ್ಯವಹಾರ ಹಾಗೂ ಕ್ರೀಡಾಖಾತೆ ಸಚಿವ ಡಾ. ಮನ್ಸುಖ್ ಮಾಂಡವೀಯ ಮನವಿ ಮಾಡಿದ್ದಾರೆ. ಅವರು ಪಟ್ನಾದ ಐತಿಹಾಸಿಕ ಗಾಂಧಿ ಮೈದಾನದಲ್ಲಿಂದು ಜೈಭೀಮ್ ಯಾತ್ರೆಗೆ ಚಾಲನೆ ನೀಡಿ ಮಾತನಾಡಿದರು. ಯುವಜನತೆ ಸಂವಿಧಾನದ ಆಶಯಗಳನ್ನು ಗೌರವಿಸಬೇಕು ಹಾಗೂ ಅಳವಡಿಸಿಕೊಳ್ಳಬೇಕು ಎಂದು ಅವರು ಹೇಳಿದರು.

<><><>

ಮುಂಬೈಯಲ್ಲಿಂದು ಆಯೋಜಿಸಲಾಗಿದ್ದ ಭೀಮ್ ಪಾದಯಾತ್ರೆಯಲ್ಲಿ ಕೇಂದ್ರ ಯುವಜನ ವ್ಯವಹಾರ ಹಾಗೂ ಕ್ರೀಡಾಖಾತೆ ರಾಜ್ಯ ಸಚಿವೆ ರಕ್ಷಾ ಖಡ್ಸೆ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವೆ ಖಡ್ಸೆ, ದೇಶದ ಪ್ರಜಾತಂತ್ರ ಪರಂಪರೆಯ ಬಗ್ಗೆ ಹೆಮ್ಮೆ ವ್ಯಕ್ತಪಡಿಸಿದರು. ಡಾ. ಅಂಬೇಡ್ಕರ್ ಅವರ ಉಪದೇಶಗಳನ್ನು ಯುವಜನತೆ ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು. ಎರಡು ಸಾವಿರಕ್ಕೂ ಅಧಿಕ ಮೈ ಭಾರತ್ ಸ್ವಯಂ ಸೇವಕರು ಪಾದಯಾತ್ರೆಯಲ್ಲಿ ಪಾಲ್ಗೊಂಡರು.

<><><>

೧೯೨೫ ರ ಏಪ್ರಿಲ್ ೧೦ ಹಾಗೂ ೧೧ ರಂದು ಕರ್ನಾಟಕದ ಬೆಳಗಾವಿಯ ನಿಪ್ಪಾಣಿಗೆ ತಲುಪಿದ್ದ ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಆಗಮನಕ್ಕೆ ೧೦೦ ವರ್ಷ ತುಂಬಿದ ಹಿನ್ನೆಲೆಯಲ್ಲಿ, ಹುಬ್ಬಳ್ಳಿಯಲ್ಲಿ ಬಿಜೆಪಿ ಭೀಮ ಹೆಜ್ಜೆ ಎಂಬ ವಿಶೇಷ ಕಾರ್ಯಕ್ರಮ ಆಯೋಜಿಸಿತ್ತು. ಹುಬ್ಬಳ್ಳಿಗೆ ಇಂದು ಆಗಮಿಸಿದ ಯಾತ್ರೆಯನ್ನು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸ್ವಾಗತಿಸಿದರು. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಪ್ರಲ್ಹಾದ್ ಜೋಶಿ, ಭೀಮ ಹೆಜ್ಜೆಗೆ ಶತಮಾನದ ಸಂಭ್ರಮವಾಗಿದ್ದು, ರಾಜ್ಯದ ವಿವಿಧೆಡೆಗಳಲ್ಲಿ ಐದು ದಿನಗಳ ಕಾಲ ಜನ ಜಾಗೃತಿ ಕಾರ್ಯಕ್ರಮಗಳು ನಡೆಯಲಿದೆ ಎಂದು ತಿಳಿಸಿದ್ದಾರೆ. ಅಂಬೇಡ್ಕರ್ ಅವರಿಗೆ ಸಂಬಂಧಿಸಿದ ಐದು ಸ್ಥಳಗಳನ್ನು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಅಭಿವೃದ್ಧಿಪಡಿಸಿದೆ ಎಂದು ತಿಳಿಸಿದ್ದಾರೆ.

<><><><>

ಅಂಬೇಡ್ಕರ್ ಜಯಂತಿ ಸಂದರ್ಭದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನಾಳೆ ಹರಿಯಾಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ. ಪ್ರಧಾನಿಯವರು ನಾಳೆ ಹರಿಯಾಣದ ಹಿಸ್ಸಾರ್‌ನಲ್ಲಿ ಹಿಸ್ಸಾರ್-ಅಯೋಧ್ಯೆ ನಡುವಿನ ವಾಣಿಜ್ಯ ವಿಮಾನ ಯಾನಕ್ಕೆ ಹಸಿರು ನಿಶಾನೆ ತೋರಿಸಲಿದ್ದಾರೆ. ನಂತರ ಹಿಸ್ಸಾರ್ ವಿಮಾನ ನಿಲ್ದಾಣದ ಹೊಸ ಟರ್ಮಿನಲ್ ಕಟ್ಟಡಕ್ಕೆ ಶಂಕುಸ್ಥಾಪನೆ ನೆರವೇರಿಸುವರು. ನಂತರ ಯಮುನಾ ಸಾಗರದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಹಾಗೂ ಲೋಕಾರ್ಪಣೆ ನೆರವೇರಿಸಲಿದ್ದಾರೆ. ಪ್ರಧಾನಿಯವರು ಇದೇ ಸಂದರ್ಭದಲ್ಲಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡುವ ಕಾರ್ಯಕ್ರಮವಿದೆ. ವಿದ್ಯುಚ್ಛಕ್ತಿ ಮೂಲಸೌಕರ್ಯಕ್ಕೆ ಒತ್ತಾಸೆ ನೀಡುವ ದೀನ ಬಂಧು ಚೋಟು ರಾಮ್ ಶಾಖೋತ್ಪನ್ನ ವಿದ್ಯುತ್ ಸ್ಥಾವರದ ೮೦೦ ಮೆಗಾವ್ಯಾಟ್ ಸಾಮರ್ಥ್ಯದ ಆಧುನಿಕ ಶಾಖೋತ್ಪನ್ನ ಘಟಕಕ್ಕೆ ಶಿಲಾನ್ಯಾಸ ನೆರವೇರಿಸಲಿದ್ದಾರೆ. ಗೋಬರ್‌ಧನ್ ಯೋಜನೆ ಅನ್ವಯ ಮುಕರಾಬ್‌ಪುರದಲ್ಲಿ ಸಂಕುಚಿತ ಜೈವಿಕ ಅನಿಲ ಸ್ಥಾವರಕ್ಕೆ ಅಡಿಗಲ್ಲು ಇರಿಸಲಿದ್ದಾರೆ. ಭಾರತ್ ಮಾಲಾ ಪರಿ ಯೋಜನೆಯಡಿ ಒಂದು ಸಾವಿರದ ೭೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ೧೪.೪ ಕಿಲೋಮೀಟರ್ ರೇವಾರಿ ಬೈಪಾಸ್ ಯೋಜನೆಯನ್ನು ಪ್ರಧಾನಿಯವರು ಸೇವೆಗೆ ಸಮರ್ಪಿಸಲಿದ್ದಾರೆ.

<><><><>

ದೇಶದ ಸಹಕಾರಿ ರಂಗದಲ್ಲಿ ಪರಿವರ್ತನೆಯ ಬದಲಾವಣೆಗಳನ್ನು ತರಲಾಗಿದೆ ಎಂದು ಕೇಂದ್ರ ಗೃಹ ಹಾಗೂ ಸಹಕಾರಿ ಖಾತೆ ಸಚಿವ ಅಮಿತ್ ಶಾ ಹೇಳಿದ್ದಾರೆ. ಅವರು ಭೂಪಾಲ್‌ನಲ್ಲಿಂದು ರಾಜ್ಯಮಟ್ಟದ ಸಹಕಾರಿ ಸಮಾವೇಶ ಉದ್ದೇಶಿಸಿ ಮಾತನಾಡಿ, ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಪ್ರತ್ಯೇಕ ಸಹಕಾರಿ ಸಚಿವಾಲಯ ರೂಪಿಸಿದ ನಂತರ ಅನೇಕ ಗುಣಾತ್ಮಕ ಬದಲಾವಣೆಗಳನ್ನು ಬೈಲಾಗಳನ್ನು ತರಲಾಗಿದೆ ಎಂದರು.

ಧ್ವನಿ : ಅಮಿತ್ ಶಾ (೩೩ ಸೆಕೆಂಡ್‌ಗಳು)

ಸರ್ಕಾರ ಗ್ರಾಮೀಣಾಭಿವೃದ್ಧಿ, ಕೃಷಿ, ಮತ್ತು ಪಶು ಸಂಗೋಪನೆ ಕಾರ್ಯಕ್ರಮಗಳನ್ನು ಏಕೀಕೃತ ಉಪಕ್ರಮದಲ್ಲಿ ಜಾರಿಗೊಳಿಸುತ್ತಿದೆ. ಸಹಕಾರಿ ನಿಯಮಗಳನ್ನು ಪ್ರಮಾಣಿಕರಿಸಲಾಗಿದೆ ಎಂದರು. ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳು ೨೦ಕ್ಕೂ ಅಧಿಕ ರಾಜ್ಯಗಳಲ್ಲಿ ಕೃಷಿಗೆ ಹಣ ನೀಡಿಕೆಯಲ್ಲದೇ ಔಷಧ ಮಾರಾಟ, ನೀರು ವಿತರಣಾಗಳಂತಹ ಸೇವೆಗಳಲ್ಲಿ ತೊಡಗಿದೆ. ಬೀಜ, ಸಾವಯವ ಮತ್ತು ರಫ್ತು ಸಹಕಾರ ಸಂಘಗಳ ಮೂಲಕ ರೈತರು ನ್ಯಾಯಯುತ ಬೆಲೆ ಪಡೆಯುತ್ತಿದ್ದಾರೆ. ಅವರ ಬ್ಯಾಂಕ್ ಖಾತೆಗಳಿಗೆ ನೇರ ಪಾವತಿ ಸಾಧ್ಯವಾಗಿದೆ ಎಂದು ಹೇಳಿದರು. ಎರಡೂವರೆ ಎಕರೆ ಹೊಂದಿದ ಸಣ್ಣ ರೈತ ಕೂಡ ಸರ್ಕಾರ ಆರಂಭಿಸಿರುವ ಬೀಜ ಸಹಕಾರಿಗಳ ಮೂಲಕ ಬೀಜಗಳನ್ನು ಉತ್ಪಾದಿಸಲು ಸಾಧ್ಯವಾಗಿದೆ ಎಂದು ಅಮಿತ್ ಶಾ ತಿಳಿಸಿದರು. ಮಧ್ಯಪ್ರದೇಶದ ಮುಖ್ಯಮಂತ್ರಿ ಡಾ. ಮೋಹನ್ ಯಾದವ್ ಸೇರಿದಂತೆ ಅನೇಕ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

<><><><>

ಮುಂದಿನ ೨ ವರ್ಷಗಳಲ್ಲಿ ೧೦ ಲಕ್ಷ ಕೋಟಿ ರೂಪಾಯಿ ವೆಚ್ಚದಲ್ಲಿ ಹೆದ್ದಾರಿಗಳನ್ನು ಅಭಿವೃದ್ಧಿಪಡಿಸಲು ಯೋಜಿಸಲಾಗುತ್ತಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಹೆದ್ದಾರಿ ಖಾತೆ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ಮುಂದಿನ ೨ ವರ್ಷಗಳಲ್ಲಿ ದೇಶದ ಮೂಲಸೌಕರ್ಯ ವ್ಯವಸ್ಥೆಯನ್ನು ಜಗತ್ತಿನ ಅತ್ಯುತ್ತಮ ವ್ಯವಸ್ಥೆಗೆ ಸಮನಾಗಿ ರೂಪಾಂತರಿಸುವತ್ತ ಸರ್ಕಾರ ಕೆಲಸ ಮಾಡುತ್ತಿದೆ ಎಂದು ಅವರು ಸುದ್ದಿಸಂಸ್ಥೆಗೆ ನೀಡಿದ ಸಂದರ್ಶನದಲ್ಲಿ ತಿಳಿಸಿದ್ದಾರೆ. ಈಶಾನ್ಯ ರಾಜ್ಯಗಳ ರಸ್ತೆ ಮೂಲಸೌಕರ್ಯವನ್ನು ಅಮೆರಿಕದ ರಸ್ತೆಗಳಿಗೆ ಸಮನಾಗಿ ಅಭಿವೃದ್ಧಿಪಡಿಸಲು ಒತ್ತು ನೀಡಲಾಗುತ್ತಿದೆ. ಈಶಾನ್ಯ ರಾಜ್ಯಗಳಲ್ಲಿ ಒಟ್ಟಾರೆ ೭೮೪ ಹೆದ್ದಾರಿ ಯೋಜನೆಗಳನ್ನು

ಜಾರಿಗೊಳಿಸಲಾಗುವುದು. ೨೧ ಸಾವಿರದ ೩೦೦ ಕಿಲೋಮೀಟರ್ ಉದ್ದದ ಕಾಮಗಾರಿಗಳನ್ನು ೩ ಲಕ್ಷ ೬೦ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಕೈಗೊಳ್ಳಲಾಗುವುದು ಎಂದರು. ಈಶಾನ್ಯ ರಾಜ್ಯಗಳು ವಿವಿಧ ದೇಶಗಳಲ್ಲಿ ಗಡಿಗಳನ್ನು ಹೊಂದಿದ್ದು, ಕಠಿಣವಾದ ಕಣಿವೆಗಳನ್ನು ಹೊಂದಿವೆ ಎಂದು ಅವರು ತಿಳಿಸಿದರು. ಈಶಾನ್ಯ ರಾಜ್ಯಗಳಲ್ಲಿ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ, ಭಾರತದ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಮತ್ತು ರಾಷ್ಟ್ರೀಯ ಹೆದ್ದಾರಿ ಮತ್ತು ಮೂಲಸೌರ್ಕಯಾಭಿವೃದ್ಧಿ ನಿಗಮದಡಿ ಈ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದ್ದು, ಈ ವರ್ಷವೇ ಸುಮಾರು ೧ ಲಕ್ಷ ಕೋಟಿ ರೂಪಾಯಿ ವೆಚ್ಚದ ಯೋಜನೆಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಅವರು ಹೇಳಿದರು. ನಾಗ್ಪುರದಲ್ಲಿ ಸುಮಾರು ೧೬೦ ಕೋಟಿ ರೂಪಾಯಿ ವೆಚ್ಚದಲ್ಲಿ ಸಮೂಹ ಕ್ಷಿಪ್ರ ಸಾರಿಗೆ ಪ್ರಾಯೋಗಿಕ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ. ಯೋಜನೆಯಡಿ ೧೩೫ ಸೀಟುಗಳ ಬಸ್ ಮಾಲಿನ್ಯ ರಹಿತ ಇಂಧನ ಮೂಲ ಬಳಸಿ ಸಂಚಾರ ನಿರ್ವಹಿಸಲಿದ್ದು, ಇದು ಅತ್ಯಂತ ಮಿತವ್ಯಯದ ಸಂಚಾರ ವ್ಯವಸ್ಥೆಯಾಗುವ ನಿರೀಕ್ಷೆಯಿದೆ ಎಂದು ನಿತನ್ ಗಡ್ಕರಿ ತಿಳಿಸಿದ್ದಾರೆ.

<><><><>

ರಾಜಸ್ಥಾನದಲ್ಲಿ ಇಂದು ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಮೊದಲ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ರಾಜಸ್ಥಾನ ರಾಯಲ್ಸ್ ತಂಡವನ್ನು ೯ ವಿಕೆಟ್‌ಗಳಿಂದ ಪರಾಭವಗೊಳಿಸಿದೆ. ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಫೀಲ್ಡಿಂಗ್ ಆಯ್ದುಕೊಂಡಿತು. ರಾಜಸ್ಥಾನ ರಾಯಲ್ಸ್ ತಂಡ ನಿಗದಿತ ೨೦ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೧೬೩ ರನ್ ಮಾಡಿತು. ಗೆಲ್ಲಲು ೧೬೪ ರನ್ ಗಳ ಗುರಿ ಬೆನ್ನತ್ತಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ೧೬.೩ ಓವರ್‌ಗಳಲ್ಲಿ ೧ ವಿಕಟ್ ನಷ್ಟಕ್ಕೆ ೧೬೫ ರನ್ ಮಾಡಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>